70 ಶ್ರೀ ರಾಮಲಿಂಗಾ ರೆಡ್ಡಿ : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಜನವರಿ 2008 ರಿಂದ ನವೆಂಬರ್ 2009 ರ ವರೆಗೆ ಎಷ್ಟು ಜನ ರೈತರು ಸಾಲದ ಭಾದೆಯಿಂದ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಆ) ಹಾಗಿದ್ದಲ್ಲಿ, ಮೃತಪಟ್ಟ ರೈತರ ಕುಟುಂಬಗಳಿಗೆ ಸರ್ಕಾರ ನೀಡಿದ ಪರಿಹಾರ ಧನವೆಷ್ಟು;

ಇ) ರೈತರ ಆತ್ಮಹತ್ಯೆ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಸ್.ಎ. ರವೀಂದ್ರನಾಥ್ (ಕೃಷಿ ಸಚಿವರು) :

ಅ) ಜನವರಿ 2008 ರಿಂದ ನವೆಂಬರ್, 2009 ವರೆಗೆ 535 ರೈತರ ಆತ್ಮಹತ್ಯೆ ಪ್ರಕರಣಗಳು ರಾಜ್ಯದಲ್ಲಿ ವರದಿಯಾಗಿರುತ್ತವೆ.

ಆ) ರೈತರ ಆತ್ಮಹತ್ಯೆ ಪರಿಶೀಲನಾ ಸಮಿತಿಯು ಅರ್ಹ ಪ್ರಕರಣವೆಂದು ತೀರ್ಮಾನಿಸಿದ 217 ರೈತರ ಆತ್ಮಹತ್ಯೆ ಪ್ರಕರಣಗಳಿಗೆ ತಲಾ ರೂ. 1.00 ಲಕ್ಷದಂತೆ ಒಟ್ಟು ರೂ. 217 ಲಕ್ಷಗಳ ಪರಿಹಾರ ವಿತರಿಸಲಾಗಿದೆ.

ಇ)

1. ರಿಯಾಯಿತಿದರದಲ್ಲಿ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಬಿತ್ತನೆ ಬೀಜ ಹಾಗೂ ಇತರೆ ಕೃಷಿ ಪರಕರಗಳನ್ನು ವಿತರಿಸಲಾಗುತ್ತಿದೆ.
2. ಟ್ರಾಕ್ಟರ್, ಪವರ್ ಟಿಲ್ಲರ್ ಮತ್ತು ಹೈಟೆಕ್ ಕೃಷಿ ಉಪಕರಣಗಳನ್ನು, ಹನಿ ನೀರಾವರಿ, ತುಂತುರು ನೀರಾವರಿ ಘಟಕಗಳ ರಿಯಾಯಿತಿ ದರದಲ್ಲಿ ವಿತರಣೆ.
3. ಕೃಷಿ ತಾಂತ್ರಿಕತೆಯ ಬಗ್ಗೆ ರೈತರಿಗೆ ತರಬೇತಿ ನೀಡಲಾಗುತ್ತಿದೆ.
4. ಸಾಗುವಳಿ ವೆಚ್ಚ ಕಡಿಮೆಮಡಲು ಸಾವಯವ ಕೃಷಿ ಬಗ್ಗೆ ಪ್ರೋತ್ಸಾಹಿಸಲಾಗುತ್ತಿದೆ.
5. ಮಣ್ಣು ಪರೀಕ್ಷೆ ಆಧಾರದ ಮೇಲೆ ಮಣ್ಣಿನ ಫಲವತ್ತತೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗಿದೆ.

6. ಕೀಟನಾಶಕ, ಪೀಡೆ ನಾಶಕಗಳು ಹಾಗು ಸಿಂಪರಣಾ ಯಂತ್ರಗಳನ್ನು ರಿಯಾಯಿತಿ ದರದಲ್ಲಿ ಒದಗಿಸಲಾಗುತ್ತಿದೆ.
7. ಎಣ್ಣೆ ಕಾಳು, ದ್ವಿದಳ ಧಾನ್ಯ, ಹತ್ತಿ ಬೆಳೆಗಳಿಗೂ ಸಹ ರಿಯಾಯಿತಿ ದರದಲ್ಲಿ ವಿವಿಧ ಸವಲತ್ತುಗಳನ್ನು ಒದಗಿಸಲಾಗುತ್ತಿದೆ.
8. 2009–10 ನೇ ಸಾಲಿನಲ್ಲಿ ಶೇ.3 ರ ಬಡ್ಡಿದರದಲ್ಲಿ ಕೃಷಿ ಸಾಲ ನೀಡುವ ಯೋಜನೆ ಜಾರಿಯಲ್ಲಿದೆ.

480 ಶ್ರೀ ಕೃಷ್ಣಮೂರ್ತಿ ಕೆ.ಎಂ (ಕಡೂರು) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವಸತಿ ರಹಿತರಿಗೆ ವಸತಿ ನೀಡುವ ಯೋಜನೆಯಡಿ (ಆಶ್ರಯ/ಇಂದಿರಾ ಆವಾಸ್) ಸರ್ಕಾರ ಇದೂವರೆಗೂ ವಿತರಿಸಿರುವ ವಸತಿಗಳ ಸಂಖ್ಯೆ ಎಷ್ಟು;

ಆ) ವಸತಿ ರಹಿತರನ್ನು ಗುರ್ತಿಸಿ ಆಯ್ಕೆ ಮಾಡುವ ಸಲುವಾಗಿ ಸರ್ಕಾರ ಯಾವ ಯಾವ ಕ್ರಮ ಅನುಸರಿಸಿದೆ; ಅನುಸರಿಸಿರುವ ಕ್ರಮ ಸಮರ್ಪಕವಾಗಿದೆಯೇ (ವಿವರವಾದ ಮಾಹಿತಿ ಒದಗಿಸುವುದು);

ಇ) ಆಯ್ಕೆ ಸಮಿತಿಯಲ್ಲಿ ಶಾಸಕರ ನೇತೃತ್ವದಲ್ಲಿ ಪುನರ್ ರಚಿಸುವ ಉದ್ದೇಶ ಸರ್ಕಾರಕ್ಕಿದೆಯೇ;

ಈ) ಕೊಳಚೆ ನಿರ್ಮೂಲನಾ ಮಂಡಳಿ ವತಿಯಿಂದ ಕೊಳಚೆ ಪ್ರದೇಶಗಳ ಅಭಿವೃದ್ಧಿಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

ಉ) ಕೊಳಚೆ ಪ್ರದೇಶಗಳಲ್ಲಿ ಮನೆಗಳನ್ನು ನಿರ್ಮಾಣ ಮಾಡಲು ಮತ್ತು ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಎಷ್ಟು ಅನುದಾನ ಒದಗಿಸಿದೆ?

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯ ಮಂತ್ರಿಯವರು) :

ಅ) ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ಅಸ್ತಿತ್ವಕ್ಕೆ ಬಂದಾಗಿನಿಂದ ಇಲ್ಲಿಯವರೆಗೂ ಒಟ್ಟು 16,83,627 ಮನೆಗಳನ್ನು ಪೂರ್ಣಗೊಳಿಸಿ ವಿತರಿಸಲಾಗಿದೆ. ಯೋಜನಾವಾರು ವಿವರ ಈ ಕೆಳಗಿನಂತೆ ನೀಡಲಾಗಿದೆ.